All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
25.11.2025 07.35 a.m.
<><><*><><<>

ಮುಖ್ಯಾಂಶಗಳು

೧. ಅಯೋಧ್ಯೆಯ ರಾಮ ಮಂದಿರದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ ಧ್ವಜಾರೋಹಣ

೨. ಹ್ಯಾಮರ್ ಶಸ್ತ್ರಾಸ್ತ್ರ ಉತ್ಪಾದನೆಗಾಗಿ ಬಿಇಎಲ್, ಫ್ರಾನ್ಸ್‌ನ ಸಫ್ರಾನ್ ಕಂಪನಿ ಒಪ್ಪಂದ

೩. ಸತತ ಎರಡನೇ ಬಾರಿಗೆ ಕಬಡ್ಡಿ ವಿಶ್ವಕಪ್ ಮುಡಿಗೇರಿಸಿಕೊಂಡ ಭಾರತದ ಮಹಿಳಾ ತಂಡ

೪. ಜೈಪುರದಲ್ಲಿ ಐದನೇ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟಕ್ಕೆ ಚಾಲನೆ

<><><*><><<>

ಅಯೋಧ್ಯೆಯಲ್ಲಿ ಇಂದು ನಡೆಯಲಿರುವ ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗಿಯಾಗಲಿದ್ದಾರೆ. ಇದೇ ವೇಳೆ ಪ್ರಧಾನಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಶ್ರೀರಾಮ ಜನ್ಮಭೂಮಿ ದೇವಾಲಯದ ಕಟ್ಟಡ ಕಾಮಗಾರಿಗಳೆಲ್ಲ ಪೂರ್ಣಗೊಂಡ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ.. ಈಗಾಗಲೇ ವೇದಾಚಾರ್ಯರು, ವೇದಘೋಷಗಳೊಂದಿಗೆ ವೈದಿಕ ಪದ್ಧತಿಯಂತೆ ಗಣಪತಿ ಪೂಜೆ, ಪಂಚಾಂಗ ಪೂಜೆ, ಶೋಡೊಷ ಮಾತೃಕಾ ಪೂಜೆ ಮತ್ತು ವಾಸ್ತು ಹಾಗೂ ನವಗ್ರಹ ಪೂಜೆಗಳನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿದ್ದಾರೆ. ತಮ್ಮ ಭೇಟಿಯ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು, ಮಾತಾ ಅನ್ನಪೂರ್ಣ ಮಂದಿರಕ್ಕೂ ಭೇಟಿ ನೀಡಲಿದ್ದಾರೆ. ರಾಮ ದರ್ಬಾರ್ ಗರ್ಭಗುಡಿಯಲ್ಲಿ ದರ್ಶನ ಪಡೆದು ಪೂಜೆ ಸಲ್ಲಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಅಯೋಧ್ಯೆ ನಗರದಲ್ಲಿ ರೋಡ್ ಶೋ ನಡೆಸಲಿದ್ದಾರೆ.

<><><*><><<>

ಗುರು ತೇಜ್ ಬಹದ್ದೂರ್ ಜಿ ಅವರ ೩೫೦ ನೇ ಶಹೀದಿ ದಿವಸ್ ಸ್ಮರಣಾರ್ಥ ವಿಶೇಷ ಕಾರ್ಯಕ್ರಮದಲ್ಲಿ ಭಾಗಿಯಾಗಲು ಪ್ರಧಾನಿ ನರೇಂದ್ರ ಮೋದಿ ಇಂದು ಸಂಜೆ ಕುರುಕ್ಷೇತ್ರಕ್ಕೆ ಭೇಟಿ

ನೀಡಲಿದ್ದಾರೆ.  ಈ ಸಂದರ್ಭದಲ್ಲಿ, ಮೋದಿ ಅವರು ಗುರು ತೇಜ್ ಬಹದ್ದೂರ್ ಅವರ ೩೫೦ ನೇ ಶಹೀದಿ ದಿವಸ್ ಸ್ಮರಣಾರ್ಥ ವಿಶೇಷ ನಾಣ್ಯ ಮತ್ತು ಸ್ಮರಣಾರ್ಥ ಅಂಚೆಚೀಟಿ ಬಿಡುಗಡೆ ಮಾಡಲಿದ್ದಾರೆ. ಕೇಂದ್ರ ಸರ್ಕಾರವು, ಈ ವರ್ಷಪೂರ್ತಿ ಸ್ಮರಣಾರ್ಥ ವಿಶೇಷ ಕಾರ್ಯಗಳನ್ನು ಆಯೋಜಿಸುತ್ತಿದೆ.  ತಮ್ಮ ಭೇಟಿಯ ಸಮಯದಲ್ಲಿ, ಪ್ರಧಾನಮಂತ್ರಿ ಅವರು ಶ್ರೀಕೃಷ್ಣನ ಪವಿತ್ರ ಶಂಖದ ಗೌರವಾರ್ಥವಾಗಿ ಹೊಸದಾಗಿ ನಿರ್ಮಿಸಲಾದ ಪಾಂಚಜನ್ಯ ಕಟ್ಟಡವನ್ನು ಉದ್ಘಾಟನೆ ಮಾಡಲಿದ್ದಾರೆ.  ನಂತರ ಸಂಜೆ, ಮೋದಿ ಅವರು ಪವಿತ್ರ ಯಾತ್ರಾ ಸ್ಥಳಗಳಲ್ಲಿ ಒಂದಾದ ಬ್ರಹ್ಮ ಸರೋವರದಲ್ಲಿ ದರ್ಶನ ಮತ್ತು ಪೂಜೆಯನ್ನು ನೆರವೇರಿಸಲಿದ್ದಾರೆ.  ಇದೇ ೧೫ ರಿಂದ ಡಿಸೆಂಬರ್ ೫ ರವರೆಗೆ ಕುರುಕ್ಷೇತ್ರದಲ್ಲಿ ನಡೆಯುತ್ತಿರುವ ಅಂತಾರಾಷ್ಟ್ರೀಯ ಗೀತಾ ಮಹೋತ್ಸವದ ಭಾಗವಾಗಿ ಈ ಕಾರ್ಯಕ್ರಮ ಆಯೋಜನೆ ಮಾಡಲಗಿದೆ.

<>><><*><><<>

ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಮತ್ತು ಫ್ರಾನ್ಸ್‌ನ ಸಫ್ರಾನ್ ಎಲೆಕ್ಟ್ರಾನಿಕ್ಸ್ ಮತ್ತು ಡಿಫೆನ್ಸ್, ನವದೆಹಲಿಯಲ್ಲಿ ಹ್ಯಾಮರ್ ಶಸ್ತ್ರಾಸ್ತ್ರ ಉತ್ಪಾದನೆಗಾಗಿ ಜಂಟಿ ಒಪ್ಪಂದಕ್ಕೆ ಸಹಿ ಹಾಕಿವೆ. ಭಾರತೀಯ ವಾಯುಪಡೆ ಮತ್ತು ನೌಕಾಪಡೆಯ ಕಾರ್ಯಾಚರಣೆಯ ಅಗತ್ಯಗಳನ್ನು ಪೂರೈಸಲು ಹ್ಯಾಮರ್‌ನ ಉತ್ಪಾದನೆ, ಪೂರೈಕೆ ಮತ್ತು ನಿರ್ವಹಣೆಗಾಗಿ ಈ ಒಪ್ಪಂದ ಮಾಡಿಕೊಳ್ಳಲಾಗಿದೆ. ಪ್ರಮುಖ ಎಲೆಕ್ಟ್ರಾನಿಕ್ಸ್ ಮತ್ತು ಯಾಂತ್ರಿಕ ಭಾಗಗಳನ್ನು ಸ್ಥಳೀಯವಾಗಿ ತಯಾರಿಸುವುದರ ಜೊತೆಗೆ ದೇಶೀಕರಣ ಕ್ರಮೇಣ ಶೇಕಡಾ ೬೦ ರಷ್ಟು ಹೆಚ್ಚಾಗುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಹ್ಯಾಮರ್- ಹೆಚ್ಚಿನ ನಿಖರತೆ ಮತ್ತು ಮಾಡ್ಯುಲರ್ ವಿನ್ಯಾಸಕ್ಕೆ ಹೆಸರುವಾಸಿಯಾದ ನಿಖರ ಶಸ್ತ್ರಾಸ್ತ್ರ ವ್ಯವಸ್ಥೆಯಾಗಿದ್ದು, ಇದು ರಫೇಲ್ ಮತ್ತು ಲಘು ಯುದ್ಧ ವಿಮಾನ ತೇಜಸ್ ಸೇರಿದಂತೆ ವಿವಿಧೆಡೆ ಹೊಂದಿಕೊಳ್ಳುತ್ತದೆ.

<>><><*><><<>

ಉತ್ತರ ಪ್ರದೇಶದ ಬಾಗ್‌ಪತ್ ಜಿಲ್ಲೆಯಲ್ಲಿ ಕೌಶಲ್ಯ ಭಾರತ ಕೇಂದ್ರವನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವ ಜಯಂತ್ ಚೌಧರಿ ಜಂಟಿಯಾಗಿ ಉದ್ಘಾಟಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಈ ಉಪಕ್ರಮವು ಭಾರತದ ವಿಸ್ತರಿಸುತ್ತಿರುವ ಡಿಜಿಟಲ್ ಮತ್ತು ಎಲೆಕ್ಟ್ರಾನಿಕ್ಸ್ ಪರಿಸರ ವ್ಯವಸ್ಥೆಯನ್ನು ಬೆಂಬಲಿಸುವ ತಾಂತ್ರಿಕವಾಗಿ ಸಬಲೀಕರಣಗೊಂಡ ಕಾರ್ಯಪಡೆಯನ್ನು ನಿರ್ಮಿಸುವ ಸರ್ಕಾರದ ಧ್ಯೇಯವನ್ನು ಬಲಪಡಿಸುತ್ತದೆ ಎಂದು ಹೇಳಿದ್ದಾರೆ. ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಜಯಂತ್ ಚೌಧರಿ, ಬರೌತ್‌ನಲ್ಲಿ ತೆರೆಯಲಾದ ಕೌಶಲ್ಯ

ಭಾರತ ಕೇಂದ್ರವು ಗ್ರಾಮೀಣ ಮತ್ತು ಸೇವೆ ವಂಚಿತ ಪ್ರದೇಶಗಳಲ್ಲಿ ಮನೆ ಬಾಗಿಲಿಗೆ ಅವಕಾಶಗಳನ್ನು ಕೊಂಡೊಯ್ಯುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.

<>><><*><><<>

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಿನ್ನೆ ಉತ್ತರ ಪ್ರದೇಶದ ಬಾಗ್‌ಪತ್‌ನ ಬರೌತ್‌ನಿಂದ ದೆಹಲಿ ಮತ್ತು ಶಾಮ್ಲಿ ನಡುವಿನ ಎರಡು ಮೆಮು ರೈಲು ಸೇವೆಗಳಿಗೆ ಹಸಿರು ನಿಶಾನೆ ತೋರಿದರು. ಈ ಮೆಮು ರೈಲುಗಳು ವಿದ್ಯಾರ್ಥಿಗಳು ಮತ್ತು ವೃತ್ತಿಪರರಿಗೆ ಉತ್ತಮ ಪ್ರಯಾಣ ಆಯ್ಕೆಗಳನ್ನು ಒದಗಿಸುತ್ತವೆ, ಸಂಪರ್ಕವನ್ನು ಸುಧಾರಿಸುತ್ತವೆ ಹಾಗೂ ಪ್ರದೇಶದ ಆರ್ಥಿಕತೆಯನ್ನು ಹೆಚ್ಚಿಸುತ್ತವೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಈ ಸೇವೆಗಳ ಪ್ರಾರಂಭವು ಸುಧಾರಿತ ಚಲನಶೀಲತೆಯ ಮೂಲಕ ಈ ಪ್ರದೇಶದ ದೈನಂದಿನ ಪ್ರಯಾಣಿಕರು, ವಿದ್ಯಾರ್ಥಿಗಳು, ರೈತರು ಮತ್ತು ವೃತ್ತಿಪರರಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಹೇಳಿದ್ದಾರೆ. ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿಯಲ್ಲಿ ೨೫ ಕೋಟಿ ರೂಪಾಯಿ ವೆಚ್ಚದಲ್ಲಿ ಶಾಮ್ಲಿ ನಿಲ್ದಾಣವನ್ನು ಆಧುನಿಕ ಮತ್ತು ವಿಶ್ವ ದರ್ಜೆಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲಾಗುತ್ತಿದೆ ಎಂದು ಈ ಸಂದರ್ಭದಲ್ಲಿ ಮಾಹಿತಿ ನೀಡಿದರು.

ಧ್ವನಿ: ಅಶ್ವಿನಿ ವೈಷ್ಣವ್ ( 26 ಸೆಕೆಂಡ್ಸ್)

<>><><*><><<>

ಛತ್ತೀಸ್‌ಗಢದಲ್ಲಿ, ಸುಮಾರು ಐವತ್ತು ಲಕ್ಷ ರೂಪಾಯಿಗಳ ಒಟ್ಟು ಬಹುಮಾನವನ್ನು ಹೊಂದಿದ್ದ ಹದಿನೈದು ಮಾವೋವಾದಿಗಳು ನಿನ್ನೆ ಸುಕ್ಮಾ ಜಿಲ್ಲೆಯಲ್ಲಿ ಶಸ್ತ್ರಾಸ್ತ್ರಗಳನ್ನು ತ್ಯಜಿಸಿ, ಶರಣಾಗಿದ್ದಾರೆ. ಹತ್ತು ಪುರುಷರು ಮತ್ತು ಐದು ಮಹಿಳೆಯರನ್ನು ಒಳಗೊಂಡ ಈ ಗುಂಪು, ಜಿಲ್ಲಾ ಪೊಲೀಸ್ ಪ್ರಧಾನ ಕಚೇರಿಯಲ್ಲಿ ಸುಕ್ಮಾ ಪೊಲೀಸ್ ವರಿಷ್ಠಾಧಿಕಾರಿ ಕಿರಣ್ ಚವಾಣ್ ಅವರ ಮುಂದೆ ಔಪಚಾರಿಕವಾಗಿ ಶರಣಾಯಿತು. ಈ ಪೈಕಿ ನಿಷೇಧಿತ ಪೀಪಲ್ಸ್ ಲಿಬರೇಶನ್ ಗೆರಿಲ್ಲಾ ಆರ್ಮಿಯ ಮದ್ವಿ ಸನ್ನಾ, ಸೋಡಿ ಹಿಡ್ಮೆ, ಸೂರ್ಯಮ್ ಅಲಿಯಾಸ್ ರವ್ವಾ ಸೋಮ ಮತ್ತು ಮೀನಾ ಅಲಿಯಾಸ್ ಮದ್ವಿ ಭೀಮೆ - ತಲಾ ಎಂಟು ಲಕ್ಷ ರೂಪಾಯಿಗಳ ಬಹುಮಾನ ಹೊಂದಿದ್ದರು.

<>><><*><><<>

ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಅದ್ಧೂರಿ ಸಮಾರಂಭದಲ್ಲಿ, ಐದನೇ ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟಕ್ಕೆ ರಾಜಸ್ಥಾನ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಮತ್ತು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಮನ್ಸುಖ್

ಮಾಂಡವಿಯಾ ಚಾಲನೆ ನೀಡಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವ ಮನ್ಸುಖ್ ಮಾಂಡವಿಯಾ, ಪ್ರಧಾನಿ ನರೇಂದ್ರ ಮೋದಿ ಅವರು ಭಾರತವನ್ನು ಕ್ರೀಡಾ ಕ್ಷೇತ್ರದಲ್ಲಿ ವಿಶ್ವದ ಅಗ್ರ ರಾಷ್ಟ್ರಗಳಲ್ಲಿ ಇರಿಸುವ ಸ್ಪಷ್ಟ ಗುರಿಯನ್ನು ಹೊಂದಿದ್ದಾರೆ. ಈ ದೃಷ್ಟಿಕೋನವನ್ನು ಗಮನದಲ್ಲಿಟ್ಟುಕೊಂಡು, ಖೇಲೋ ಇಂಡಿಯಾ ಉಪಕ್ರಮವನ್ನು ಪ್ರಾರಂಭಿಸಲಾಯಿತು ಮತ್ತು ಈ ಆಟಗಳ ಮೂಲಕ, ಹೊಸ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ, ಪ್ರೋತ್ಸಾಹಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಖೇಲೋ ಇಂಡಿಯಾದಿಂದ ಹೊರಹೊಮ್ಮುವ ಕ್ರೀಡಾಪಟುಗಳನ್ನು ಅಂತಾರಾಷ್ಟ್ರೀಯ ಸ್ಪರ್ಧೆಗಳಿಗೆ ಸಿದ್ಧಪಡಿಸಲು ವಿಶ್ವ ದರ್ಜೆಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಕಳೆದ ದಶಕದಲ್ಲಿ, ಭಾರತೀಯ ಕ್ರೀಡಾಪಟುಗಳು ಒಲಿಂಪಿಕ್ಸ್ ಮತ್ತು ಇತರೆ ಜಾಗತಿಕ ಕಾರ್ಯಕ್ರಮಗಳಲ್ಲಿ ತಮ್ಮ ಕಾರ್ಯಕ್ಷಮತೆಯನ್ನು ಗಮನಾರ್ಹವಾಗಿ ಸುಧಾರಿಸಿದ್ದಾರೆ ಎಂದು ಹೇಳಿದ್ದಾರೆ. ದೇಶಾದ್ಯಂತ ೨೩೦ ವಿಶ್ವವಿದ್ಯಾಲಯಗಳಿಂದ ಸುಮಾರು ೫ ಸಾವಿರ ಕ್ರೀಡಾಪಟುಗಳು ಸೇರಿದಂತೆ ಸುಮಾರು ೭ ಸಾವಿರ ಪ್ರತಿನಿಧಿಗಳು ಕ್ರೀಡಾಕೂಟದಲ್ಲಿ ಭಾಗವಹಿಸುತ್ತಿದ್ದಾರೆ. ಈ ಸ್ಪರ್ಧೆಗಳನ್ನು ಜೈಪುರದಲ್ಲಿ ಮಾತ್ರವಲ್ಲದೆ, ಉದಯಪುರ, ಜೋಧಪುರ, ಕೋಟಾ ಮತ್ತು ಅಜ್ಮೀರ್‌ನಲ್ಲಿಯೂ ನಡೆಸಲಾಗುತ್ತಿದೆ.

<><><*><><<>

ಭಾರತದ ಮಹಿಳಾ ತಂಡ ಸತತ ಎರಡನೇ ಬಾರಿಗೆ ಕಬಡ್ಡಿ ವಿಶ್ವಕಪ್ ಗೆದ್ದಿದೆ. ಢಾಕಾದಲ್ಲಿ ನಿನ್ನೆ ನಡೆದ ಅಂತಿಮ ಪಂದ್ಯದಲ್ಲಿ ಚೈನೀಸ್ ತೈಪೆಯನ್ನು ೩೫-೨೮ ಅಂತರದಿಂದ ಭಾರತ ತಂಡ ಪರಾಭವಗೊಳಿಸಿತು. ಸೆಮಿಫೈನಲ್‌ನಲ್ಲಿ ಇರಾನ್ ಅನ್ನು ೩೩-೨೧ ಅಂತರದಿಂದ ಸೋಲಿಸುವ ಮೊದಲು ಭಾರತ ತಂಡ ಎಲ್ಲಾ ಗುಂಪು ಹಂತದ ಪಂದ್ಯಗಳನ್ನು ಗೆದ್ದಿತು. ಚೈನೀಸ್ ತೈಪೆ ಕೂಡ ಅಜೇಯವಾಗಿ ಫೈನಲ್ ಪ್ರವೇಶಿಸಿತು. ಬಿ ಗುಂಪಿನಲ್ಲಿ ಅಗ್ರಸ್ಥಾನ ಪಡೆದು ಸೆಮಿಫೈನಲ್‌ನಲ್ಲಿ ಆತಿಥೇಯ ಬಾಂಗ್ಲಾದೇಶವನ್ನು ೨೫-೧೮ ಅಂತರದಿಂದ ಸೋಲಿಸಿತು. ೨೦೨೫ ರ ಕಬಡ್ಡಿ ವಿಶ್ವಕಪ್ ವಿಜೇತ ಭಾರತದ ಮಹಿಳಾ ತಂಡವನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಕಬಡ್ಡಿ ತಂಡದ ಗೆಲುವು ಅಸಂಖ್ಯಾತ ಯುವಕರಿಗೆ ಕಬಡ್ಡಿಯಲ್ಲಿ ಮುಂದುವರಿಯಲು, ದೊಡ್ಡ ಕನಸು ಸಾಕಾರಗೊಳ್ಳಲು ಮತ್ತು ಉನ್ನತ ಗುರಿ ಹೊಂದಲು ಪ್ರೇರಣೆ ನೀಡುತ್ತದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ.

<><><*><><<>

ಗುವಾಹಟಿಯಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ದ್ವಿತೀಯ ಟೆಸ್ಟ್ ಕ್ರಿಕೆಟ್ ಪಂದ್ಯದ ಮೂರನೇ ದಿನದಾಟ ನಿನ್ನೆ ಮುಕ್ತಾಯವಾಗಿದ್ದು, ಇಂದು ನಾಲ್ಕನೇ ದಿನದಾಟ

ಮುಂದುವರಿಯಲಿದೆ.  ದಕ್ಷಿಣ ಆಫ್ರಿಕಾ ಎರಡನೇ ಇನ್ನಿಂಗ್ಸ್‌ನಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೆ, ೨೬ ರನ್ ಗಳಿಸಿದ್ದು, ರಿಯಾನ್ ರಿಕಲ್ ಟನ್ ೧೩ ಹಾಗೂ ಹೇಜನ್ ಮಾಕ್ರಮ್ ೧೨ ರನ್ ಗಳಿಸಿ, ಕ್ರೀಸ್‌ನಲ್ಲಿದ್ದಾರೆ. ದಕ್ಷಿಣ ಆಫ್ರಿಕಾ ಒಟ್ಟಾರೆಯಾಗಿ ೩೧೪  ರನ್‌ಗಳ ಮುನ್ನಡೆಯಲ್ಲಿದೆ.  ಇದಕ್ಕೂ ಮುನ್ನ ಮೊದಲ ಇನ್ನಿಂಗ್ಸ್‌ನಲ್ಲಿ ದಕ್ಷಿಣ ಆಫ್ರಿಕಾ ೪೮೯ ರನ್‌ಗಳಿಗೆ ಆಲ್‌ಔಟ್ ಆಗಿತ್ತು.  ಭಾರತ ಮೊದಲ ಇನ್ನಿಂಗ್ಸ್‌ನಲ್ಲಿ ೨೦೧ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ಹಿನ್ನಡೆ ಅನುಭವಿಸಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು  ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>